1. ಹೂವಿನ ಹಡಗಲಿ ತಾಲ್ಲೂಕಿನ ಗ್ರಾಮಾಂತರ ಪ್ರದೇಶದಲ್ಲಿ 1997-98ರ ಸಮೀಕ್ಷೆ ಪ್ರಕಾರ 12,815 ಕುಟುಂಬಗಳನ್ನು ಬಿ.ಪಿ.ಎಲ್. ಪಟ್ಟಿಯಲ್ಲಿ ಸೇರಿಸಲಾಗಿತ್ತು.

2. 2000ನೇ ಇಸ್ವಿಯಲ್ಲಿ ಹಸಿರು ಕಾರ್ಡುಗಳನ್ನು ಬದಲಿಸಿ ಹಳದಿ ಕಾರ್ಡುಗಳನ್ನಾಗಿ ಪರಿವರ್ತಿಸುವ ಬಿ.ಪಿ.ಎಲ್. ಪಟ್ಟಿಯಲ್ಲಿರುವ ಅರ್ಹ ಫಲಾನುಭವಿಗಳ ಸಂಖ್ಯೆ: 9007

3. 41 ಅನರ್ಹರನ್ನು ಕೈಬಿಡಲಾಗಿದೆ.

4. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯವರ ಸಮೀಕ್ಷೆಯಲ್ಲಿ ಗುರುತಿಸಿದ ಫಲಾನುಭವಿಗಳ ಪಟ್ಟಿಯಲ್ಲಿದ್ದ ಆಯಾ ಗ್ರಾಮಸಭೆಗಳಲ್ಲಿ ಗುರುತಿಸಿದ ಅರ್ಹ ಕುಟುಂಬಗಳಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲು ಕ್ರಮವಹಿಸಲಾಗುತ್ತಿದೆ. ಉಳಿದಂತೆ ಹೊಸದಾಗಿ ಗುರುತಿಸಲ್ಪಟ್ಟ ಬಿ.ಪಿ.ಎಲ್. ಕುಟುಂಬಗಳಿಗೆ ಅರ್ಹತೆಯ ಆಧಾರದ ಮೇಲೆ ಹಳದಿ ಪಡಿತರ ಚೀಟಿಯನ್ನು ವಿತರಿಸುವ ವಿಧಿ ವಿಧಾನಗಳ ಬಗ್ಗೆ ಸರ್ಕಾರವು ಪರಿಶೀಲಿಸುತ್ತಿದೆ.

ಹೊಸ ನ್ಯಾಯ ಬೆಲೆ ಅಂಗಡಿಗಳ ಮಂಜೂರಾತಿ.

3028(3697)

ಶ್ರೀ ಹಾಲಪ್ಪ ಪಿ.ಬಿ.(ಹಡಗಲಿ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸದಾಗಿ ನ್ಯಾಯಬೆಲೆ ಅಂಗಡಿಯನ್ನು ತೆರೆಯಲು ಅವಕಾಶ ಇದೆಯೇ? ಹಾಗಿದ್ದಲ್ಲಿ ಎಂತಹ ಸಂದರ್ಭಗಳಲ್ಲಿ ತೆರೆಯಲು ಅವಕಾಶವಿದೆ?

ಶ್ರೀ ಡಿ.ಬಿ.ಇನಾಂದಾರ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು):

ಅ) ಹೌದು.

ಹೊಸ ನ್ಯಾಯಬೆಲೆ ಅಂಗಡಿ ಮಂಜೂರಾತಿಯ ಬಗ್ಗೆ ಸರ್ಕಾರ ನಿರ್ಬಂಧ ತಂದಿದೆ. ಆದಾಗ್ಯೂ ಸರ್ಕಾರದ ದಿನಾಂಕ : 1.2.2001ರ ಪತ್ರದಲ್ಲಿನ ಸೂಚನೆಗಳಂತೆ ಈ ಕೆಳಕಂಡ ಸಂದರ್ಭಗಳಲ್ಲಿ ಹೊಸ ನ್ಯಾಯಬೆಲೆ ಅಂಗಡಿ

ಮಂಜೂರಾತಿಗಾಗಿ ವಿಧಿಸಿರುವ ನಿರ್ಬಂಧವನ್ನು ಸಡಿಲಿಸಿ ಅಗತ್ಯ ಕ್ರಮವಹಿಸಬಹುದಾಗಿರುತ್ತದೆ.

ಆ) ಯಾವುದೇ ನ್ಯಾಯಬೆಲೆ ಅಂಗಡಿಯ ಪ್ರಾಧಿಕಾರವನ್ನು ರದ್ದುಪಡಿಸಿದ ಸಂದರ್ಭದಲ್ಲಿ ನ್ಯಾಯಬೆಲೆ ಅಂಗಡಿಯವರು ಮೇಲ್ಮನವಿ : ಪುನರ್ ಪರಿಶೀಲನೆ ಅಥವಾ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶವನ್ನು ಉಪಯೋಗಿಸಿಕೊಂಡು ನಂತರ ಅಂತಿಮವಾಗಿ ನ್ಯಾಯ ಬೆಲೆ ಅಂಗಡಿಯ ಪ್ರಾಧಿಕಾರವನ್ನು ರದ್ದುಪಡಿಸಿರುವುದನ್ನು ಎತ್ತಿ ಹಿಡಿದ ಸಂದರ್ಭದಲ್ಲಿ ಅಂತಹ ನ್ಯಾಯಬೆಲೆ ಅಂಗಡಿಗಳಿಗೆ ಬದಲಾಗಿ ಹೊಸ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಪ್ರಾಧಿಕರಣ, ಅಧಿಕಾರಿಗಳು (ಜಿಲ್ಲೆಯ ಜಿಲ್ಲಾಧಿಕಾರಿಗಳು) ಕ್ರಮ ತೆಗೆದುಕೊಳ್ಳಬಹುದಾಗಿರುತ್ತದೆ.

ಇ) ಕೆಲವೊಂದು ನಿರ್ದಿಷ್ಟ ಸಂದರ್ಭಗಳಲ್ಲಿ ಹೊಸ ನ್ಯಾಯಬೆಲೆ ಅಂಗಡಿಗಳನ್ನು ಅತ್ಯಾವಶ್ಯಕವಾಗಿ ತೆಗೆಯಬೇಕೆಂದು ಜಿಲ್ಲಾಧಿಕಾರಿಗಳಿಗೆ ಕಂಡು ಬಂದಲ್ಲಿ, ಅವರು ಪರಿಸ್ಥಿತಿಯನ್ನು ಪೂರ್ಣವಾಗಿ ವಿವರಿಸಿ ಹೊಸ ನ್ಯಾಯಬೆಲೆ ಅಂಗಡಿಗಳಿಗೆ ಮಂಜೂರಾತಿಗಾಗಿ ಸರ್ಕಾರದ ಪೂರ್ವಾನುಮತಿ ಪಡೆಯಲು ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿರುತ್ತದೆ.

ಯಗಚಿ ಯೋಜನೆಯಡಿ ಶೇಖರಣೆಯಾಗುತ್ತಿರುವ ನೀರಿನ ಪ್ರಮಾಣ.

3029(3381)

ಶ್ರೀ ಹನುಮೇಗೌಡ ಕೆ.ಹೆಚ್.(ಹಾಸನ): ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಹಾಸನ ಜಿಲ್ಲೆ ಬೇಲೂರು ತಾಲ್ಲೂಕಿನಲ್ಲಿ ನಿರ್ಮಾಣವಾಗುತ್ತಿರುವ ಯಗಚಿ ಯೋಜನೆಯಲ್ಲಿ ಎಷ್ಟು ಟಿ.ಎಂ.ಸಿ. ನೀರು ಶೇಖರಣೆಯಾಗುತ್ತಿದೆ ವಿವರ ನೀಡುವುದು?

ಆ. ಈ ಯೋಜನೆಯಿಂದ ಬೇಲೂರು ಮತ್ತು ಹಾಸನ ತಾಲ್ಲೂಕಿನ ಯಾವ ಯಾವ ಹೋಬಳಿಗಳಲ್ಲಿ ಎಷ್ಟು ಎಷ್ಟು ಎಕರೆಗೆ ನೀರು ಒದಗಿಸಲಾಗುತ್ತಿದೆ ವಿವರ ನೀಡುವುದು?

ಶ್ರೀ ಎಚ್.ಕೆ.ಪಾಟೀಲ್ (ಜಲ ಸಂಪನ್ಮೂಲ ಮಂತ್ರಿಗಳು):

ಅ. ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನಲ್ಲಿ ನಿರ್ಮಾಣವಾಗುತ್ತಿರುವ ಯಗಚಿ